**ಬಂಟ್ವಾಳ ಪುರಸಭೆಯ ಘನ ತ್ಯಾಜ್ಯಾ ವಿಲೇವಾರಿ**

**798(1338) ಶ್ರೀ ಖಾದರ್ ಯು ಟಿ:**(ಮಂಗಳೂರು) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಂಟ್ವಾಳ ಪುರಸಭೆ ವ್ಯಾಪ್ತಿಯಲ್ಲಿ ಶೇಖರಣೆಯಾಗುವ ಘನ ತ್ಯಾಜ್ಯವನ್ನು ಸಜ್ಜಪನಡು ಗ್ರಾಮದ ಕಂಚಿನಡ್ಕ ಪದವು ಎಂಬಲ್ಲಿ ಹಾಕಲು ನಿಗದಿಯಾಗಿದ್ದು, ಇದನ್ನು ಸ್ಥಳೀಯ ನಾಗರೀಕರು ವಿರೋಧ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗುವುದು; ಹಾಗೂ ಪರಿಸರ ಮಾಲಿನ್ಯ ತಡೆಗಟ್ಟಲು ಕೈಗೊಳ್ಳಲಿರುವ ಕ್ರಮಗಳೇನು?

**ಶ್ರೀ ಬಾಲಚಂದ್ರ ಲಕ್ಷ್ಮಣ ರಾವ್ ಜಾರಕಿ ಹೊಳಿ(ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು)**

ಅ) ಬಂದಿದೆ.

ಆ) ಘನ ತ್ಯಾಜ್ಯಾ ವಸ್ತು ವಿಲೇವಾರಿಯನ್ನು ಆಧುನಿಕ ರೀತಿಯಲ್ಲಿ ಮಾಡಲು ಉದ್ದೇಶಿಸಲಾಗಿದ್ದು, ಸದ್ರಿ ನಿವೇಶನಕ್ಕೆ ಪ್ರಥಮ ಹಂತದಲ್ಲಿ ಆವರಣ ರಚನೆ ಕೆಲಸವನ್ನು ರೂ. 62.00 ಲಕ್ಷ ಮೊತ್ತದಲ್ಲಿ ಕಾರ್ಯಾದೇಶ ನೀಡಲಾಗಿದೆ. ಆವರಣ ಗೋಡೆ ಕೆಲಸ ಪೂರ್ಣಗೊಂಡ ನಂತರ ಘನ ತ್ಯಾಜ್ಯ ವಸ್ತುಗಳನ್ನು ಪರಿಸರಕ್ಕೆ ಧಕ್ಕೆ ಆಗದಂತೆ ತ್ಯಾಜ್ಯ ಸಂಸ್ಕರಣೆ ಮತ್ತು ವಿಲೇವಾರಿ ಘಟಕಗಳನ್ನು ಸ್ಥಾಪಿಸಿ ವಿಲೇ ಮಾಡಲು ಕ್ರಮ ಕೈಗೊಳ್ಳಲಾಗುವುದು. ಸದರಿ ಸ್ಥಳದಲ್ಲಿ ತ್ಯಾಜ್ಯ ವಿಲೇವಾರಿ ಮಾಡಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ದಿನಾಂಕ 23.10.2009ರಂದು ನಿರಾಕ್ಷೇಪಣಾ ಪತ್ರ ಪಡೆಯಲಾಗಿದೆ.

**ದೇವಸ್ಥಾನಗಳ ಜೀರ್ಣೋದ್ಧಾರ**

**799(1339) ಶ್ರೀ ಖಾದರ್ ಯು ಟಿ:**(ಮಂಗಳೂರು) ಮಾನ್ಯ ಗೃಹ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?